# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 125 | Pages. 2 | Date: 18-03-2025, WEDNESDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 125 - ಪುಟಗಳು : 2 - 18 ಮಾರ್ಚ್ 2025 ಬುಧವಾರ Ph: 8762954248 ದರ : ₹1


# ಅಂಬುಲೆನ್ಸ್ ಹಣದಾಹಕ್ಕೆ ಶೀಘ್ರ ಮೂಗುದಾರ

## ಬಡವರ ರಕ್ತ ಹೀರುವ ಚಾಲಕರು | ಆರೋಗ್ಯ ಇಲಾಖೆ ಎಚ್ಚರಿಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಸಕಲೇಶಪುರದಲ್ಲಿ ಇತ್ತೀಚೆಗೆ ಅಪಘಾತದಲ್ಲಿ ಗಾಯಗೊಂಡ ಯುವಕನೊಬ್ಬನಿಗೆ ಸಕಾಲಕ್ಕೆ ಸೂಕ್ತ ಚಿಕಿತ್ಸೆ ದೊರೆಯದೇ ಸಾವಿಗೀಡಾಗಲು ಅಂಬುಲೆನ್ಸ್ ಚಾಲಕರು ಹಾಗೂ ಕೆಲಸ ಖಾಸಗಿ ನರ್ಸಿಂಗ್ ಹೋಂ ಮಾಲೀಕರ ಲಾಭಕೋರತನ ಕಾರಣ ಎನ್ನುವ ಮಾಧ್ಯಮ ವರದಿ, ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ ಎಚ್ಚೆತ್ತಿರುವ ಆರೋಗ್ಯ ಇಲಾಖೆ ಅಂಬುಲೆನ್ಸ್‌ಗಳಿಗೆ ಮೂಗುದಾರ ಸಿದ್ಧಪಡಿಸಲು ಮುಂದಾಗಿದೆ. ಈ ಬಗ್ಗೆ ಕನ್ನಡ ಪೋಸ್ಟ್ ಜತೆ ಮಾತನಾಡಿದ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಅನಿಲ್ ಶೀಘ್ರದಲ್ಲೇ ಖಾಸಗಿ ಅಂಬುಲೆನ್ಸ್‌ಗಳಿಗೂ ಮಾರ್ಗಸೂಚಿ ಸಿದ್ಧಪಡಿಸಲಾಗುವುದು ಎಂದರು.

### ಖಾಸಗಿ ಅಂಬುಲೆನ್ಸ್‌ಗಳಿಗೆ ಬರಲಿದೆ ಮಾರ್ಗಸೂಚಿ




ಖಾಸಗಿ ಅಂಬುಲೆನ್ಸ್‌ಗಳ ಮೇಲೆ ಆರೋಗ್ಯ ಇಲಾಖೆಗೆ ನಿಯಂತ್ರಣವೇ ಇಲ್ಲ ಎನ್ನುವ ವಿಷಯ ಈಗ ಮುನ್ನೆಲೆಗೆ ಬಂದಿದೆ. ರೋಗಿಗಳನ್ನು ಆಸ್ಪತ್ರೆಗಳಿಗೆ ಕರೆದೊಯ್ಯುವಾಗಿನ ಪೈಪೋಟಿ, ದುಬಾರಿ ಶುಲ್ಕ ವಸೂಲಿ, ತಮಗೆ ಲಾಭ ತರುವ ಖಾಸಗಿ ಆಸ್ಪತ್ರೆಗೇ ರೋಗಿಗಳನ್ನು ಕರೆದೊಯ್ಯುವಂತಹ ಆರೋಪಗಳು ಖಾಸಗಿ ಅಂಬುಲೆನ್ಸ್ ಮಾಲೀಕರ ಮೇಲಿದೆ.

ಆದರೆ ಅಂಬುಲೆನ್ಸ್‌ಗಳ ಸೇವೆ ನಿಯಂತ್ರಿಸಲು ಆರೋಗ್ಯ ಇಲಾಖೆಗೆ ಅವಕಾಶವೇ ಇಲ್ಲವಾಗಿದೆ. ರೋಗಿಗಳನ್ನು ಸಾಗಿಸುವಾಗ ಕನಿಷ್ಠ ಮೂಲ ಚಿಕಿತ್ಸಾ ಸೌಕರ್ಯಗಳನ್ನು ಅಂಬುಲೆನ್ಸ್‌ಗಳು ಹೊಂದಿವೆಯೇ, ಇಲ್ಲವೇ, ಎನ್ನುವ ಪರಿಶೀಲನೆಯನ್ನೂ ಆರೋಗ್ಯ ಇಲಾಖೆ ನಡೆಸಲು ಅವಕಾಶ ಇಲ್ಲವಾಗಿದೆ. ಇದರ ನೇರ ಪರಿಣಾಮ ರೋಗಿಗಳು ಮತ್ತು ಅವರ ಕುಟುಂಬ ಸದಸ್ಯರ ಮೇಲಾಗುತ್ತಿದೆ. ಈಗ ಜಿಲ್ಲಾ ಆರೋಗ್ಯಾಧಿಕಾರಿ ಈ ಬಗ್ಗೆ ಜಿಲ್ಲಾಧಿಕಾರಿ ಗಮನ ಸೆಳೆದು ಅವರ ನೇತೃತ್ವದಲ್ಲಿಯೇ ಪ್ರಾದೇಶಿಕ ಸಾರಿಗೆ ಅಧಿಕಾರಿ ಸಹಯೋಗದಲ್ಲಿ ಖಾಸಗಿ ಅಂಬುಲೆನ್ಸ್ ಸೇವೆಗೆ ಮಾರ್ಗಸೂಚಿ ರೂಪಿಸಲು ಆಲೋಚನೆ ಹೊಂದಿದೆ. ಕನಿಷ್ಠ ಖಾಸಗಿ ಅಂಬುಲೆನ್ಸ್‌ಗಳು ಆರೋಗ್ಯ ಇಲಾಖೆಯಲ್ಲಿ ನೋಂದಣಿಯಾಗಬೇಕು, ರೋಗಿಗಳನ್ನು ಕರೆದೊಯ್ಯುವ ಮಾಹಿತಿಯನ್ನು ಹಂಚಿಕೊಳ್ಳಬೇಕು, ಇಲಾಖೆಯಿಂದ ಆಗಾಗ್ಗೆ ಪರಿಶೀಲನೆಗೊಳಪಡುವ ಅಗತ್ಯವಿದೆ.

### ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸಭೆ

ಅಂಬುಲೆನ್ಸ್ ಚಾಲಕರ ಕಾನೂನು ಬಾಹಿರ ಕೃತ್ಯಕ್ಕೆ ಕಡಿವಾಣ ಹಾಕಲು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಶೀಘ್ರ ಸಭೆ ಕರೆಯಲಾಗುವುದು. ಜಿಲ್ಲೆಯಲ್ಲಿ 108 ಅಂಬುಲೆನ್ಸ್‌ಗಳು 26, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯ 20 ವಾಹನಗಳಿವೆ. ಖಾಸಗಿ ಅಂಬುಲೆನ್ಸ್‌ಗಳು ಅಧಿಕವಾಗಿವೆ. ಖಾಸಗಿ ವಾಹನಗಳ ಮಾಲೀಕರು ಹಾಗು ಚಾಲಕರ ಸಭೆ ಕರೆದು ಕಟ್ಟುನಿಟ್ಟಿನ ಸೂಚನೆ ನೀಡಲಾಗುವುದು. ಸಾರ್ವಜನಿಕರಿಗೆ ತೊಂದರೆ ನೀಡುವವರು ಯಾರೇ ಆದರೂ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು. ಈ ಕುರಿತು ಯಾವುದೇ ದೂರುಗಳಿದ್ದೂ ದಿನದ 24 ಗಂಟೆ ನನ್ನನ್ನು ಸಂಪರ್ಕಿಸಬಹುದು ಎಂದು ಡಿಹೆಚ್‌ಓ ಹೇಳಿದರು.

### ಹಣ ಸಂಪಾದನೆಯೇ ಗುರಿ

ಖಾಸಗಿ ಅಂಬುಲೆನ್ಸ್‌ಗಳು ನನ್ನ ನಿಯಂತ್ರಣದಲ್ಲಿ ಇರುವುದಿಲ್ಲವಾದರೂ ಖಾಸಗಿ ಆಸ್ಪತ್ರೆಗಳ ಮೇಲೆ ಕ್ರಮ ಜರುಗಿಸುವ ಅಧಿಕಾರ ನನಗಿದೆ. ಆಸ್ಪತ್ರೆಯವರು ಹಣ ಸಂಪಾದನೆಯನ್ನೇ ಬಂಡವಾಳ ಮಾಡಿಕೊಂಡಿದ್ದರೆ ಯಾವ ಕಾರಣಕ್ಕೂ ಸಹಿಸುವುದಿಲ್ಲ. ಆ ರೀತಿ ನಡೆಯಲು ನಾನು ಬಿಡುವುದಿಲ್ಲ. ಶೀಘ್ರ ವಿಡಿಯೋ ಕಾನ್ಫರೆನ್ಸ್ ಮೂಲಕ ಸೂಚನೆ ನೀಡುತ್ತೇನೆ ಎಂದು ಹೇಳಿದರು.

"ಆಸ್ಪತ್ರೆಗೆ ರೋಗಿಗಳನ್ನು ದಾಖಲಿಸುವ ವಿಚಾರದಲ್ಲಿ ಅಂಬುಲೆನ್ಸ್ ಚಾಲಕರಿಂದ ಆಗುತ್ತಿರುವ ಮೋಸದ ಕುರಿತು ದೂರುಗಳು ಬಂದಿವೆ. ಇದಕ್ಕೆಲ್ಲ ಸಂಪೂರ್ಣ ಕಡಿವಾಣ ಹಾಕಲಾಗುವುದು. ಬಡ ರೋಗಿಗಳ ಹಿತದೃಷ್ಟಿಯಿಂದ ಸರ್ಕಾರ ಉಚಿತ ಆರೋಗ್ಯ ಸೇವೆ ಕಲ್ಪಿಸುತ್ತಿದೆ. ತಪ್ಪಿತಸ್ಥರು ಯಾರೇ ಆಗಿದ್ದರೂ ಮುಲಾಜಿಲ್ಲದೆ ಕ್ರಮ ಜರುಗಿಸುತ್ತೇನೆ.

- ಡಾ. ಅನಿಲ್‌ಕುಮಾರ್, ಡಿಹೆಚ್‌ಓ ಹಾಸನ



### ಶೇ. 20 ಕಮಿಷನ್ ಬಹಿರಂಗ ಸತ್ಯ



ಜಿಲ್ಲೆಯಲ್ಲಿ ಅಂಬುಲೆನ್ಸ್ ಮಾಲೀಕರು ಹಾಗು ಚಾಲಕರ ಹಣದಾಹ ಮಿತಿ ಮೀರಿದ್ದು ತುರ್ತು ಸಂದರ್ಭದಲ್ಲಿ ಅವರು ಕೇಳಿದಷ್ಟು ಹಣ ಕೊಡುವುದು ರೋಗಿಗಳಿಗೆ ಅನಿವಾರ್ಯವಾಗಿರುತ್ತದೆ. ಅಪಘಾತ, ಹೆರಿಗೆ ಮತ್ತಿತರ ಸಂದರ್ಭಗಳಲ್ಲಿ ಹಣಕ್ಕಿಂತ ಬೇಗ ಆಸ್ಪತ್ರೆ ಸೇರುವುದು ಮುಖ್ಯವಾಗಿರುವುದರಿಂದ ಬಡವರು ಸಾಲ ಸೋಲ ಮಾಡಿಯಾದರೂ ಹಣ ಕೊಡಲೇಬೇಕಾಗಿದೆ. ಅದನ್ನೇ ಬಂಡವಾಳ ಮಾಡಿಕೊಂಡಿರುವ ಅವರು ಖಾಸಗಿ ಆಸ್ಪತ್ರೆಗೆ ರೋಗಿಗಳನ್ನು ಕರೆದೊಯ್ಯುತ್ತಾರೆ. ಇಂತಹ ರೋಗಿಗಳನ್ನು ಕರೆತಂದರೆ ಒಟ್ಟು ಬಿಲ್‌ನಲ್ಲಿ ಶೇ. 20ರಷ್ಟು ಕಮಿಷನ್ ಅಂಬುಲೆನ್ಸ್ ಚಾಲಕರಿಗೆ ಸಿಗುತ್ತದೆ ಎಂಬುದು ಬಹಿರಂಗ ಸತ್ಯ. ಬಡವರ ರಕ್ತ ಹೀರುವುದನ್ನೇ ಕೆಲವರು ಕಾಯಕ ಮಾಡಿಕೊಂಡಿದ್ದಾರೆ.

## ವಿದ್ಯುತ್ ತಗುಲಿ ವ್ಯಕ್ತಿ ಸಾವು



ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಆಲೂರು: ತಾಲ್ಲೂಕಿನ ಹುಣಸೆ ಗ್ರಾಮದ ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕ ವಿದ್ಯುತ್ ತಗುಲಿ ಸೋಮವಾರ ಮೃತಪಟ್ಟಿದ್ದಾರೆ.

ತಾಲ್ಲೂಕಿನ ವಾಟೆಹೊಳೆ ಸಮೀಪದ ಹರಿಹರಪುರ ಗ್ರಾಮದ ಲಕ್ಷ್ಮಣ್ (50) ಮೃತರು. ಬೆಳಿಗ್ಗೆ ಕೂಲಿ ಕೆಲಸಕ್ಕೆಂದು ಕಾಮತಿ ಸಮೀಪದ ಹುಣಸೆ ಗ್ರಾಮದ ಶಿವಣ್ಣ ಎಂಬುವರ ಕಾಫಿ ತೋಟದ ಕೆಲಸಕ್ಕೆ ತೆರಳಿದ್ದರು. ಮರ ಹತ್ತಿ ಮೆಣಸು ಕುಯ್ಯುವಾಗ ಪಕ್ಕದಲ್ಲಿ ಹಾದು ಹೋಗಿದ್ದ ವಿದ್ಯುತ್ ತಂತಿ ತಗುಲಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಮೃತರಿಗೆ ಇಬ್ಬರು ಮಕ್ಕಳು, ಪತ್ನಿ ಇದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಐಕನಹಳ್ಳಿ ಗ್ರಾಪಂ: ಅಂಬುಜಾ ಅಧ್ಯಕ್ಷೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಗಡಿ ಗ್ರಾಮ ಐಕನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಅಂಬುಜಾ ಉದಯಶಂಕರ್ ಎರಡನೇ ಬಾರಿಗೆ ಸೋಮವಾರ ಅವಿರೋಧ ಆಯ್ಕೆಯಾದರು.

ಸುಧಾ ದೇವರಾಜ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಚುನಾವಣೆ ಪ್ರಕ್ರಿಯೆ ನಡೆಯಿತು. ಅಂಬುಜ ಉದಯಶಂಕರ್ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧ ಆಯ್ಕೆ ಘೋಷಿಸಲಾಯಿತು.

ಕರ್ನಾಟಕ ಸಹಕಾರ ಮಂಡಳಿ ನಿರ್ದೇಶಕ ಸಿ.ಎನ್. ಪುಟ್ಟಸ್ವಾಮಿಗೌಡ, ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಎಂ. ಕಿರಣ್, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯೆ ಶಾರದಮ್ಮ ಕೃಷ್ಣೇಗೌಡ, ಎಪಿಎಂಸಿ ಮಾಜಿ ಅಧ್ಯಕ್ಷ ಐನೋರಹಳ್ಳಿ ಮಲ್ಲೇಶ್, ಕಿಕ್ಕೇರಿ ಹೋಬಳಿ ಜೆಡಿಎಸ್ ಅಧ್ಯಕ್ಷ ಮಂಜೇಗೌಡ, ತಾ.ಪಂ. ಮಾಜಿ ಅಧ್ಯಕ್ಷ ರಾಮೇಗೌಡ, ಆನೆಗೊಳ ಸೊಸೈಟಿ ನಿರ್ದೇಶಕ ಉದಯಶಂಕರ್ ಮತ್ತಿತರರು ನೂತನ ಅಧ್ಯಕ್ಷರಿಗೆ ಅಭಿನಂದಿಸಿದರು.

## ಕೌಶಲ ವೃದ್ಧಿಯಿಂದ ಮಹಿಳೆಯರ ಸ್ವಾವಲಂಬನೆ: ಎಚ್.ಡಿ.ರೇವಣ್ಣ



ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹೊಳೆನರಸೀಪುರ: ಮಹಿಳಾ ಸಬಲೀಕರಣಕ್ಕಾಗಿ ಸರ್ಕಾರ ಹತ್ತು ಹಲವು ಯೋಜನೆ ಜಾರಿಗೊಳಿಸಿದ್ದು ಅದರ ಸದುಪಯೋಗವನ್ನು ಅರ್ಹರು ಪಡೆಯಬೇಕು ಎಂದು ಶಾಸಕ ಹೆಚ್.ಡಿ. ರೇವಣ್ಣ ಹೇಳಿದರು.

ತಾಲ್ಲೂಕು ಕಚೇರಿ ಆವರಣದಲ್ಲಿ ಮಹಿಳಾ ಸ್ವಸಹಾಯ ಸಂಘಗಳ ಕೌಶಲ ಮತ್ತು ಉದ್ಯಮಶೀಲತೆ ಸಂವರ್ಧನೆಯಡಿ ಹಮ್ಮಿಕೊಂಡಿರುವ ಸಂಜೀವಿನಿ ಮೇಳಕ್ಕೆ ಸೋಮವಾರ ಚಾಲನೆ ನೀಡಿ ಮಾತನಾಡಿದರು.

ಬುಧವಾರದ ವರೆಗೆ ಸ್ವಸಹಾಯ ಸಂಘಗಳಿಂದ ತಯಾರಾದ ಉತ್ಪನ್ನಗಳ ವ್ಯಾಪಾರ ನಡೆಯಲಿದೆ. ಮಹಿಳಾ ಸಬಲೀಕರಣಕ್ಕಾಗಿ ಹಲವು ಯೋಜನೆಗಳನ್ನು ಸರ್ಕಾರ ಜಾರಿಗೆ ತಂದಿದೆ. ಕೌಶಲ ಅಭಿವೃದ್ಧಿ ಹಾಗು ಜೀವನೋಪಾಯ ಕಂಡುಕೊಳ್ಳಲು ಗ್ರಾಮೀಣ ಜನರಿಗೆ ಇದು ವರದಾನವಾಗಿದೆ. ಸ್ತ್ರೀ ಶಕ್ತಿ, ಸ್ವಸಹಾಯ ಸಂಘಗಳು ಕೌಶಲ ವೃದ್ಧಿಸಿಕೊಂಡರೆ ಉತ್ಪನ್ನಗಳ ಮಾರಾಟದ ಮೂಲಕ ಮಹಿಳೆಯರ ಆರ್ಥಿಕ ಸ್ವಾವಲಂಬಿತನದ ಅಭಿವೃದ್ಧಿಯಾಗಲಿದೆ ಎಂದರು.

## ಸ್ವಾವಲಂಬಿ ಬದುಕಿಗೆ ಕಾನೂನು ಸಲಹೆ ಪಡೆಯಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್



ಹಾಸನ: ಇಂದಿಗೂ ಸಮಾಜದಲ್ಲಿ ತಣ್ಣನೆಯ ಶೋಷಣೆ ಚಾಲ್ತಿಯಲ್ಲಿದೆ. ಮಹಿಳೆಯರ ಪರವಾಗಿ ಇರುವ ಕಾನೂನಾತ್ಮಕ ಸಹಕಾರವನ್ನು ಮತ್ತು ಕೌಟುಂಬಿಕ ಶೋಷಣೆ ನಿಗ್ರಹಿಸುವ ಕಾನೂನುಗಳ ಸದುಪಯೋಗ ಆಗಬೇಕು ಎಂದು ಸಾಹಿತಿ ಬಾನು ಮುಷ್ತಾಕ್ ಹೇಳಿದರು.

ತಾಲ್ಲೂಕಿನ ಸೀಗೆಗುಡ್ಡದ ಮಳೆ ಮಲ್ಲೇಶ್ವರ ದೇವಾಲಯದ ಪ್ರಾಂಗಣದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್, ಜಿಲ್ಲಾ ಹಾಗೂ ಬೇಲೂರು ತಾಲ್ಲೂಕು ಕದಳಿ ಮಹಿಳಾ ವೇದಿಕೆ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ವಿಶ್ವ ಮಹಿಳಾ ದಿನಾಚರಣೆ ಹಾಗು ಮಹಿಳಾ ಕವಿಗೋಷ್ಠಿ ಉದ್ಘಾಟಿಸಿ ಮಾತನಾಡಿ, ಮಹಿಳೆಯರು ತಮ್ಮ ಹಕ್ಕು ಬಾಧ್ಯತೆಗಳತ್ತ ಗಮನ ಹರಿಸಬೇಕು. ಅಂತಃ ಸತ್ವದ ಪ್ರತಿಭೆಯ ಸುಪ್ತನದಿಯನ್ನು ಒಣಗಲು ಬಿಡದೆ ಬಹಿರ್ಮುಖಿಯಾಗಿ ಹರಿಸಬೇಕು ಎಂದು ಕಿವಿಮಾತು ಹೇಳಿದರು.

ಮಹಿಳೆಯರ ಪರವಾಗಿ ಇರುವ ಕಾನೂನಾತ್ಮಕ ಸಹಕಾರವನ್ನು ಮತ್ತು ಕೌಟುಂಬಿಕ ಶೋಷಣೆ ನಿಗ್ರಹಿಸುವ ಕಾನೂನುಗಳ ಸದುಪಯೋಗ ಪಡೆಯಬೇಕು. ಸ್ವಾವಲಂಬಿ ಬದುಕನ್ನು ಸ್ತ್ರೀಯರು ಕಟ್ಟಿಕೊಳ್ಳಬೇಕು ಎಂದರು.

ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಎಂ.ಆರ್. ತೀರ್ಥಕುಮಾರಿ ವೆಂಕಟೇಶ್ ಮಾತನಾಡಿ, ಮಹಿಳಾ ವೇದಿಕೆ ಎಂದರೆ ಪುರುಷ ವಿರೋಧಿ ಚರ್ಚೆಯ ತಾಣವಲ್ಲ. ಶರಣ ತತ್ವ, ಜೀವನ ಸಂಸ್ಕಾರವನ್ನು ಜನಮಾನಸಕ್ಕೆ ತಲುಪಿಸುವ ಕಾರ್ಯವನ್ನು ವೇದಿಕೆ ಮಾಡಿಕೊಂಡು ಬಂದಿದೆ. ವಚನ ಸಾಹಿತ್ಯದಿಂದ ಮಾತ್ರ ಸಮಾಜದಲ್ಲಿ ಮರೆಯಾಗುತ್ತಿರುವ ಮೌಲ್ಯವನ್ನು ಪುನರ್ ಸ್ಥಾಪಿಸಲು ಸಾಧ್ಯ ಎಂದರು.

ಯೋಗ ಶಿಕ್ಷಕ ಚೇತನ್ ಮಾತನಾಡಿ, ಭಾರತದಲ್ಲಿ ಮಹಿಳೆಯರನ್ನು ಪೂಜನೀಯ ಸ್ಥಾನದಲ್ಲಿ ನೋಡಲಾಗುತ್ತಿದೆ. ಮಹಿಳೆ ಮನೆಯ ಮುಖ್ಯ ಸ್ಥಾನವನ್ನು ವಹಿಸುವ ಜೊತೆಗೆ ದೇಶದ ಪ್ರಥಮ ಪ್ರಜೆಯಾಗುವವರೆಗಿನ ಎಲ್ಲಾ ಸ್ಥಾನಮಾನಗಳನ್ನು ಗಳಿಸಿದ್ದಾರೆ. ಮಹಿಳೆಯರು ಮಾನಸಿಕವಾಗಿ ಸದೃಢರಾಗಿದ್ದಾರೆ. ಇಷ್ಟಾದರೂ ಮಹಿಳೆಯರಲ್ಲಿ ದೈಹಿಕ ಸಾಮರ್ಥ್ಯ ಕುಂದುತ್ತಿರುವುದು ಶೋಚನೀಯ. ಆದ್ದರಿಂದ ಮಹಿಳೆಯರು ಮಾನಸಿಕ ಆರೋಗ್ಯ ದೃಢತೆಗಾಗಿ ಉತ್ತಮ ಜೀವನ ಶೈಲಿಯನ್ನು ರೂಢಿಸಿಕೊಳ್ಳಬೇಕು. ಕುಟುಂಬದ ಆರೋಗ್ಯ ನಿರ್ವಹಣೆಯನ್ನು ಮಾಡುವ ಗುರುತರ ಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ವಕೀಲ ಲಿಂಗರಾಜು ಮಾತನಾಡಿ, ಮಹಿಳೆಯರನ್ನು ಅವಹೇಳನಕಾರಿಯಾಗಿ ಬಿಂಬಿಸುವ ಪ್ರವೃತ್ತಿ ಹೆಚ್ಚುತ್ತಿದೆ. ಆ ಮನಸ್ಥಿತಿ ಬದಲಾಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಲೇಖಕಿ ಸುಶೀಲಾ ಸೋಮಶೇಖರ್ ಮಾತನಾಡಿ, ನಮ್ಮ ಜೀವನ ಶೈಲಿ, ಚಿಂತನೆಗಳು ನಮ್ಮ ಮೇಲೆ ಇತರರ ಗೌರವ ಹೆಚ್ಚುವಂತೆ ಮಾಡಬೇಕೆ ಹೊರತು ಅಪಹಾಸ್ಯ ಮಾಡುವಂತಿರಬಾರದು. ಶಿಕ್ಷಣ ಎಷ್ಟೇ ಮುಂದುವರೆದರೂ ಮಹಿಳಾ ದೌರ್ಜನ್ಯಕ್ಕೆ ಕಡಿವಾಣ ಬೀಳುತ್ತಿಲ್ಲ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕೆಂದರೆ ಎಲ್ಲರೂ ಸುಸಂಸ್ಕೃತರಾಗಬೇಕು ಎಂದರು.

ಶ್ರೀ ನಂದೀಶ್ವರ ಸ್ವಾಮೀಜಿ, ಜಿಲ್ಲಾ ಲೇಖಕಿಯರ ಬಳಗದ ಅಧ್ಯಕ್ಷೆ ರಾಜೇಶ್ವರಿ ಹುಲ್ಲೇನಹಳ್ಳಿ, ಸುನಂದ, ತಾಲ್ಲೂಕು ಕದಳಿ ವೇದಿಕೆ ಅಧ್ಯಕ್ಷೆ ಗಿರಿಜಾ ನಿರ್ವಾಣಿ ಇದ್ದರು.

## ಗಮಕ ವಾಚನ ಇತಿಹಾಸ ಪ್ರಿಯರಿಗೆ ಸುಂದರ ಅನುಭೂತಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಮಹಾಕಾವ್ಯಗಳನ್ನು ಗಮಕದ ಮೂಲಕ ಆಸ್ವಾದಿಸುವುದು ಇತಿಹಾಸದ ಮೇಲೆ ಆಸಕ್ತಿ ಇರುವವರಿಗೆ ಸುಂದರ ಅನುಭೂತಿ ಎಂದು ಸರ್ಕಾರಿ ವಿಜ್ಞಾನ ಕಾಲೇಜು ಕನ್ನಡ ವಿಭಾಗ ಮುಖ್ಯಸ್ಥ ಡಾ. ಎಸ್. ಸುಂದರೇಶ ಹೇಳಿದರು.

ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸೆ ಕೋಶ ಮತ್ತು ಕನ್ನಡ ವಿಭಾಗ, ಕರ್ನಾಟಕ ಗಮಕ ಕಲಾ ಪರಿಷತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಇತ್ತೀಚೆಗೆ ಹಮ್ಮಿಕೊಂಡಿದ್ದ ಗಮಕ ವಾಚನ-ವ್ಯಾಖ್ಯಾನ ಹಾಗು ರಸಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಡುಗನ್ನಡ, ಹಳಗನ್ನಡ ಹಾಗು ಆಧುನಿಕ ಕನ್ನಡದ ಮಹಾ ಕಾವ್ಯಗಳನ್ನು ಗಮಕದ ಮೂಲಕ ಹಾಡುವುದರ ಜೊತೆಗೆ ಆಸ್ವಾದಿಸುವುದು ಸುಂದರ ಅನುಭೂತಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಪತ್ರಾಂಕಿತ ವ್ಯವಸ್ಥಾಪಕ ಕಿರಣ್ ಮಾತನಾಡಿ, ಕಾಲೇಜಿನ ಕನ್ನಡ ವಿಭಾಗ ಹಲವಾರು ರಚನಾತ್ಮಕ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿರುವುದು ಸಂತಸದ ವಿಷಯ ಎಂದರು. ಪತ್ರಾಂಕಿತ ವ್ಯವಸ್ಥಾಪಕಿ ನಳಿನಾಕ್ಷಿ ಮಾತನಾಡಿ, ಗಮಕ ಕಲೆ ವಾಲ್ಮೀಕಿ ರಾಮಾಯಣದಲ್ಲಿಯೂ ಉಲ್ಲೇಖವಾಗಿದೆ ಎಂದು ವಿವರಿಸಿದರು.

## ಹಾಸನ ವಿವಿ ಉಳಿಸಿ: ಜಿಲ್ಲಾಧಿಕಾರಿಗೆ ಮನವಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಹಾಸನ ವಿಶ್ವ ವಿದ್ಯಾಲಯ ಮುಚ್ಚುವ ನಿರ್ಧಾರದಿಂದ ಸರ್ಕಾರ ಹಿಂದೆ ಸರಿಯಬೇಕು ಹಾಗೂ ಹಾಸನ ವಿವಿ ಉಳಿಸಿ ಸ್ವತಂತ್ರವಾಗಿ ಅಭಿವೃದ್ಧಿಪಡಿಸುವಂತೆ ವಿವಿ ಉಳಿಸಿ ಹೋರಾಟ ಸಮಿತಿಯಿಂದ ಸೋಮವಾರ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅವರಿಗೆ ಮನವಿ ಸಲ್ಲಿಸಲಾಯಿತು.


ಮೈಸೂರು ವಿವಿ ಜೊತೆಗೆ ಹಾಸನ ವಿವಿ ವಿಲೀನಗೊಳಿಸುವ ನಿರ್ಧಾರಕ್ಕೆ ನಮ್ಮ ವಿರೋಧ ಇದೆ. ಇಲ್ಲೇ ಉಳಿಸಬೇಕು. ವಿದ್ಯಾಲಯದಲ್ಲಿ ಇಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಲ್ಲಿ ಬಹುತೇಕರು ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಮತ್ತು ದಲಿತ ಹಾಗೂ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳೇ ಅಧಿಕ ಸಂಖ್ಯೆಯಲ್ಲಿದ್ದಾರೆ.

ವಿವಿ ಮುಚ್ಚಿದರೆ ಇವರಿಗೆ ಅನ್ಯಾಯ ಆಗಲಿದೆ. ವಿದ್ಯಾರ್ಥಿನಿಯರು ಉನ್ನತ ಶಿಕ್ಷಣ ಪಡೆಯುವ ಅವಕಾಶಗಳಿಂದ ವಂಚಿತರಾಗಲಿದ್ದಾರೆ ಹಾಗಾಗಿ ವಿವಿ ಮುಚ್ಚಬಾರದು ಎಂದು ಆಗ್ರಹಿಸಿದರು. ಹಾಸನ ವಿಶ್ವವಿದ್ಯಾಲಯ ಕ್ಯಾಂಪಸ್ 78.08 ಎಕರೆ ಪ್ರದೇಶ ಮಾತ್ರ ಹೊಂದಿದೆ. ಅಗತ್ಯ ಪ್ರಮಾಣದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕೊರತೆ, ಮೂಲಭೂತ ಸೌಕರ್ಯದ ಕೊರತೆ, ಅಗತ್ಯ ಅನುದಾನದ ಕೊರತೆ ನಡುವೆಯೂ ಉತ್ತಮವಾಗಿ ಕೆಲಸ ಮಾಡುತ್ತಿದೆ. ಇದರಿಂದಾಗಿ ಜಿಲ್ಲೆಯ ವಿದ್ಯಾರ್ಥಿಗಳಿಗೆ ಸ್ಥಳೀಯವಾಗಿ ಉನ್ನತ ಶಿಕ್ಷಣ ಪಡೆಯುವ ಮತ್ತು ಅಧ್ಯಯನ ಹಾಗೂ ಸಂಶೋಧನೆ ನಡೆಸುವ ಅವಕಾಶವೂ ಸಿಕ್ಕಿದೆ. ಇದರಿಂದಾಗಿ ಜಿಲ್ಲೆಯ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿಗೆ ತುಂಬಾ ಸಹಾಯವಾಗಲಿದೆ. ಭವಿಷ್ಯದಲ್ಲಿ ನಮ್ಮ ವಿಶ್ವವಿದ್ಯಾಲಯವು ಉತ್ತಮವಾಗಿ ಅಭಿವೃದ್ಧಿ ಹೊಂದಲು ಬಹಳ ಅವಕಾಶಗಳಿದ್ದು ಇದು ಹಾಸನ ಜಿಲ್ಲೆಯ ಹೆಮ್ಮೆಯೂ ಆಗಿದೆ ಎಂದರು.

ರಾಜ್ಯ ಸರ್ಕಾರ ತಾನೇ ಆರಂಭಿಸಿರುವ ಹಾಸನ ವಿಶ್ವವಿದ್ಯಾಲಯಕ್ಕೆ ಅಗತ್ಯ ಭೂಮಿ, ಸಿಬ್ಬಂದಿ, ಮೂಲಭೂತ ಸೌಕರ್ಯ ಮತ್ತು ಅನುದಾನ ನೀಡದೆ ಮುಚ್ಚಲು ಹೊರಟಿರುವುದು ಜಿಲ್ಲೆಯ ವಿದ್ಯಾರ್ಥಿಗಳಿಗೆ ಮಾಡುತ್ತಿರುವ ಅತಿದೊಡ್ಡ ಅನ್ಯಾಯ. ಈ ಹಿಂದೆ ರಾಜ್ಯ ಸರ್ಕಾರ ಯಾವುದೇ ಅಗತ್ಯ ಮೂಲಭೂತ ಸೌಕರ್ಯ, ಅನುದಾನ ಮತ್ತು ಸಿಬ್ಬಂದಿ ಒದಗಿಸದೆ ಪೂರ್ವ ಷರತ್ತು ವಿಧಿಸಿ ತರಾತುರಿಯಲ್ಲಿ ಹಾಸನ ವಿಶ್ವವಿದ್ಯಾಲಯ ಸ್ಥಾಪಿಸಿತು.ಈಗ ಮರಳಿ ರಾಜ್ಯ ಸರ್ಕಾರ ಹಿಂದಿನ ಕೊರತೆಗಳನ್ನು ಸರಿಪಡಿಸಿ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಲು ಅಗತ್ಯ ಕ್ರಮ ಕೈಗೊಳ್ಳುವ ಬದಲಿಗೆ ಅದನ್ನು ಮುಚ್ಚಲು ಹೊರಟಿದೆ. ಇದು ಸರ್ಕಾರಕ್ಕೆ ಉನ್ನತ ಶಿಕ್ಷಣ ಆದ್ಯತೆಯ ವಿಷಯವಾಗಿಲ್ಲ ಎನ್ನುವುದನ್ನು ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ಹಾಸನ ವಿಶ್ವವಿದ್ಯಾಲಯವನ್ನು ಉಳಿಸಿ ಅದಕ್ಕೆ ಅಗತ್ಯವಿರುವ ಭೂಮಿ, ಅನುದಾನ, ಖಾಯಂ ಸಿಬ್ಬಂದಿ ಮತ್ತು ಮೂಲಭೂತ ಸೌಕರ್ಯ ಕಲ್ಪಿಸುವಂತೆ ಸರ್ಕಾರವನ್ನು ಒತ್ತಾಯಿಸಲು ಹೋರಾಟ ಸಮಿತಿ ಅಸ್ತಿತ್ವಕ್ಕೆ ಬಂದಿದೆ ಎಂದರು. ಈ ವೇಳೆ ಆರ್.ಪಿ. ವೆಂಕಟೇಶ್‌ಮೂರ್ತಿ, ಡಾ. ಎಚ್.ಎಲ್. ಮಲ್ಲೇಶ್‌ಗೌಡ, ಧರ್ಮೇಶ್, ರೂಪ ಹಾಸನ, ಎಚ್.ಕೆ. ಸಂದೇಶ್, ಎಂ.ಜಿ. ಪೃಥ್ವಿ, ಅಂಬುಗ ಮಲ್ಲೇಶ್, ಅಗಿಲೆ ಯೋಗೇಶ್, ಚಿನ್ನೇನಹಳ್ಳಿ ಸ್ವಾಮಿ, ಬಿ.ಈ ಶಿವರಾಮೇಗೌಡ, ಅರವಿಂದ, ಕುಮಾರ್ ಗೌರವ್, ಸಿ.ಬಿ ವೆಂಕಟೇಗೌಡ, ಸಮೀರ್ ಅಹಮದ್, ಕಲಾವತಿ ಮತ್ತಿತರರಿದ್ದರು.

## ಸಾಲಗಾಮೆಯಲ್ಲಿ ಅರ್ಥಪೂರ್ಣ ಪುನೀತೋತ್ಸವ



ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ನಗು ಮುಖದ ರಾಜಕುಮಾರ, ಕರ್ನಾಟಕ ರತ್ನ ದಿ. ಡಾ. ಪುನೀತ್‌ರಾಜ್‌ಕುಮಾರ್ ಅವರ ಹುಟ್ಟುಹಬ್ಬದ ಅಂಗವಾಗಿ ತಾಲ್ಲೂಕಿನ ಸಾಲಗಾಮೆಯಲ್ಲಿ ಸೋಮವಾರ ಕಾಂಗ್ರೆಸ್ ಮುಖಂಡ ಡಿ.ಪಿ. ಚಂದ್ರಶೇಖರ್ (ಜೆಸಿಬಿ) ಅಭಿಮಾನಿಗಳ ಬಳಗದ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಾಗೂ ಬೈಕ್ ರ‍್ಯಾಲಿ ಹಮ್ಮಿಕೊಳ್ಳಲಾಗಿತ್ತು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ದಿ. ಡಾ.ಪುನೀತ್ ರಾಜ್ ಕುಮಾರ್ ಅವರು ಜೀವಿತಾವಧಿಯಲ್ಲಿ ಮಾಡಿದ ಅಪಾರ ಸೇವೆಯಿಂದಲೇ ಇಂದಿಗೂ ಜನರ ಮನಸ್ಸಿನಲ್ಲಿ ಜೀವಂತವಾಗಿದ್ದಾರೆ ಎಂದು ಹೇಳಿದರು. ಪುನೀತ್ ಕೇವಲ ನಟರಾಗಿ ಮಾತ್ರವಲ್ಲದೆ ಎಲೆಮರೆ ಕಾಯಿಯಂತೆ ಜನಸೇವೆಯಲ್ಲಿ ತೊಡಗುವ ಮೂಲಕ ಜನಮನ್ನಣೆ ಗಳಿಸಿದ್ದಾರೆ. ಅವರ ಸೇವಾ ಮನೋಭಾವನೆ ಹಾದಿಯಲ್ಲಿ ಎಲ್ಲರೂ ನಡೆಯಬೇಕು ಎಂದರು.

ಅವರ ಹಾದಿಯಲ್ಲೇ ಹಲವರು ಜನಸೇವೆಯಲ್ಲಿ ತೊಡಗಿದ್ದಾರೆ ಈ ಪೈಕಿ ಜೆಸಿಬಿ ಚಂದ್ರು ಕೂಡ ಒಬ್ಬರು, ಜನರ ಆರೋಗ್ಯದ ಹಿತ ದೃಷ್ಟಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಿರುವುದು ಶ್ಲಾಘನೀಯ, ಜನರು ಇದರ ಸದುಪಯೋಗ ಪಡಿಸಿಕೊಂಡು ದೊಡ್ಡ ಮನೆ ಹುಡುಗ ಎಂದೇ ಖ್ಯಾತಿ ಗಳಿಸಿರುವ ಪುನೀತ್ ಅವರ ಮಾರ್ಗದರ್ಶನದಲ್ಲಿ ಎಲ್ಲರೂ ನಡೆಯೋಣ ಎಂದರು.

ಕಾಂಗ್ರೆಸ್ ಮುಖಂಡ ಡಿ.ಪಿ ಚಂದ್ರಶೇಖರ್ ಮಾತನಾಡಿ, ಪುನೀತ್ ರಾಜ್ ಕುಮಾರ್ ಜಾತ್ಯಾತೀತ ನಾಯಕ ಅವರ ಸೇವಾ ಮನೋಭಾವನೆ ದಾರಿಯಲ್ಲಿ ನಡೆಯುವ ಸಲುವಾಗಿ ಈ ಶಿಬಿರ ಆಯೋಜಿಸಲಾಗಿದೆ. ವಿವಿಧ ಆಸ್ಪತ್ರೆಗಳಿಂದ ನುರಿತ ವೈದ್ಯರ ತಂಡ ಆಗಮಿಸಿ ಆರೋಗ್ಯ ತಪಾಸಣೆಯಲ್ಲಿ ತೊಡಗಿತ್ತು. ಅಲ್ಲದೆ ರಕ್ತದಾನ ನೇತ್ರದಾನ ಸೇರಿದಂತೆ ಹಲವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಅನ್ನದಾನ ಸಂತರ್ಪಣೆ ಸಹ ನಡೆಯಿತು.ಈ ಭಾಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲಾಗುವುದು ಎಂದರು.

## ಪ್ರತ್ಯೇಕ ಪ್ರಕರಣ: 12.83 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು

ಆಲೂರು: ಪಟ್ಟಣದ ಕೊನೆಪೇಟೆ ಹಾಗೂ ಹಳೇಸಂತೆ ಬೀದಿಯಲ್ಲಿ ಭಾನುವಾರ ನಡೆದ ಪ್ರತ್ಯೇಕ ಮನೆಗಳವು ಪ್ರಕರಣದಲ್ಲಿ ನಗದು ಸೇರಿ 12.83 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳುವಾಗಿದೆ.

ಮನೆಯ ಹಿಂಬಾಗಿಲು ಮುರಿದು ಪ್ರವೇಶಿಸಿರುವ ಕಳ್ಳರು ನಗದು ಸೇರಿ 1.35 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ಕೊನೆಪೇಟೆಯ ಯಶೋಧ ಅವರ ಮನೆಯಲ್ಲಿ ನಡೆದಿದೆ.

ಸಂಘದ ಹಣ ಕಟ್ಟುವುದಕ್ಕಾಗಿ ತೆರಳಿದ್ದಾಗ ಹಿಂಬಾಗಿಲಿನಿಂದ ಬಂದಿರುವ ಕಳ್ಳರು ಬಲವಾದ ಆಯುಧದಿಂದ ಲಾಕರ್ ಬೀಗ ಮುರಿದಿದ್ದಾರೆ. 6 ಗ್ರಾಂ ತೂಕದ ಚಿನ್ನದ ಉಂಗುರ, 5 ಗ್ರಾಂ ತೂಕದ ಚಿನ್ನದ ಉಂಗುರ, 12 ಗ್ರಾಂ ತೂಕದ ಚಿನ್ನದ ಉಂಗುರ ಹಾಗೂ 20 ಸಾವಿರ ರೂ. ನಗದು ಕದ್ದು ಪರಾರಿಯಾಗಿದ್ದಾರೆ.

# ಹಾಸನ ವಿವಿ ಉಳಿವಿಗಾಗಿ ಹೋರಾಟ

## ಪಕ್ಷಕ್ಕಿಂತ ಜಿಲ್ಲೆಯ ಅಭಿವೃದ್ಧಿ ಮುಖ್ಯ ಎಂದ ಸಂಸದ | ದುಂಡು ಮೇಜಿನ ಸಭೆ

ಹಾಸನ: ಅಭಿವೃದ್ಧಿ ವಿಚಾರದಲ್ಲಿ ನನಗೆ ಜಿಲ್ಲೆಯೇ ಮುಖ್ಯ ಹೊರತು ಪಕ್ಷವಲ್ಲ. ಹಾಸನ ವಿಶ್ವವಿದ್ಯಾಲಯ ಉಳಿಸುವ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತೇನೆ ಎಂದು ಸಂಸದ ಶ್ರೇಯಸ್ ಪಟೇಲ್ ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಭಾನುವಾರ ಹಾಸನ ವಿಶ್ವವಿದ್ಯಾಲಯ ಉಳಿಸಿ ಹೋರಾಟ ಸಮಿತಿಯಿಂದ ಹಮ್ಮಿಕೊಂಡಿದ್ದ ಹಾಸನ ವಿವಿ ಉಳಿಸಲು ದುಂಡು ಮೇಜಿನ ಸಭೆಯಲ್ಲಿ ಮಾತನಾಡಿದ ಅವರು, ನಾನು ಸಂಸದನಾಗಿದ್ದರೂ ಅಭಿವೃದ್ಧಿ, ಸರ್ಕಾರ ನಮ್ಮದೇ ಇದ್ದರೂ ಜಿಲ್ಲೆಯೇ ಮುಖ್ಯ. ಜಿಲ್ಲೆಯ ಜನರಿದ್ದರಷ್ಟೇ ಪಕ್ಷ ಹಾಗು ಸರ್ಕಾರ. ವಿಶ್ವವಿದ್ಯಾಲಯ ಮುಚ್ಚುವ ಬಗ್ಗೆ ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್ ಜೊತೆಗೆ ಮಾತನಾಡಿದ್ದೇನೆ. ಸಚಿವ ಸಂಪುಟ ಉಪ ಸಮಿತಿ ಸಭೆ ವರದಿ ಇನ್ನು ಕೈ ಸೇರಿಲ್ಲ. ವದಂತಿಗಳಿಗೆ ಕಿವಿಗೊಡಬೇಡಿ ಎಂದು ಹೇಳಿದ್ದಾರೆ ಎಂದರು.

ಜಿಲ್ಲೆಯ ಎಲ್ಲಾ ಶಾಸಕರು ಹಾಗು ಸಮಿತಿಯ ಹಿರಿಯರು ಒಟ್ಟಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗೋಣ. ಸರ್ಕಾರದ ಮಟ್ಟದಲ್ಲಿ ಕೈಗೊಳ್ಳಬಹುದಾದ ನಿರ್ಧಾರಗಳ ಕುರಿತು ಚರ್ಚೆ ಮಾಡೋಣ. ಹಾಸನ ವಿಶ್ವವಿದ್ಯಾಲಯ ಉಳಿಸುವ ಜವಾಬ್ದಾರಿ ಎಲ್ಲರ ಮೇಲೆ ಹೆಚ್ಚಿದೆ. ಈ ವಾರದಲ್ಲೇ ದಿನ ನಿಗದಿ ಮಾಡಿಕೊಂಡು ಮುಖ್ಯಮಂತ್ರಿಯವರನ್ನು ಭೇಟಿ ಮಾಡೋಣ ಎಂದು ತಿಳಿಸಿದರು.

ಶಾಸಕ ಎ. ಮಂಜು ಮಾತನಾಡಿ, ಸಚಿವ ಸಂಪುಟ ಉಪ ಸಮಿತಿಯ ವರದಿ ತರಿಸಿಕೊಂಡಿರುವ ಸರ್ಕಾರ ವಿಶ್ವವಿದ್ಯಾಲಯ ಮುಚ್ಚಲು ಮುಂದಾಗಿದೆ. ಆದರೆ ವಿಶ್ವವಿದ್ಯಾಲಯ ಮುಚ್ಚುವುದಿಲ್ಲ ಕೇವಲ ವಿಲೀನ ಮಾಡುತ್ತೇವೆ ಎಂದು ಸರ್ಕಾರ ಹೇಳುತ್ತಿದೆ. ವಿಶ್ವವಿದ್ಯಾಲಯ ಸ್ಥಾಪನೆ ಮಾಡಿರುವುದು ಅಭಿನಂದನಾರ್ಹ ಕೆಲಸ. ಮಾಜಿ ಪ್ರಧಾನಿ ದಿ. ಮನಮೋಹನ್ ಸಿಂಗ್ ಅವರೇ ಜಿಲ್ಲೆಗೊಂದು ವಿಶ್ವವಿದ್ಯಾಲಯ ತೆರೆಯಬೇಕು ಎಂದಿದ್ದರು. ಆದರಿಂದ ಜಿಲ್ಲೆಯ



ಎಲ್ಲಾ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ಅವಕಾಶವಾಗುತ್ತದೆ ಎಂದರು.

ನಾನು ಬೆಂಗಳೂರು ವಿಶ್ವವಿದ್ಯಾಲಯದಲ್ಲಿ 13 ವರ್ಷ ಸಿಂಡಿಕೇಟ್ ಸದಸ್ಯನಾಗಿದ್ದೆ. ಮಕ್ಕಳ ಭವಿಷ್ಯದೊಂದಿಗೆ ಯಾರೂ ಚೆಲ್ಲಾಟವಾಡಬಾರದು. ರಾಜ್ಯದ 224 ಶಾಸಕರಲ್ಲಿ 150ಕ್ಕೂ ಹೆಚ್ಚು ಶಾಸಕರು ಶಿಕ್ಷಣ ಸಂಸ್ಥೆಗಳನ್ನು ಹೊಂದಿದ್ದಾರೆ. ಶಿಕ್ಷಣವು ಉದ್ಯಮವಾಗಿ ಮಾರ್ಪಾಡಾಗಿದೆ. ಹಾಸನ ವಿಶ್ವವಿದ್ಯಾಲಯ ಉಳಿವಿಗಾಗಿ ಒಗ್ಗಟ್ಟಿನ ಹೋರಾಟದ ಅವಶ್ಯಕತೆಯಿದೆ. ಈ ವಿಚಾರದಲ್ಲಿ ಯಾರೂ ರಾಜಕಾರಣ ಬೆರೆಸಬಾರದು. ನಮ್ಮ ಜಿಲ್ಲೆಯಂತೆ ಬೇರೆ ಜಿಲ್ಲೆಗಳಲ್ಲೂ ಹೋರಾಟ ನಡೆಯುತ್ತಿದೆ. ವಿಶ್ವವಿದ್ಯಾಲಯಕ್ಕೆ ಕೇವಲ ರಾಜ್ಯ ಸರ್ಕಾರ ಮಾತ್ರ ಅನುದಾನ ನೀಡುವುದಿಲ್ಲ. ಕೇಂದ್ರ ಹಾಗು ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ ನೆರವು ಇರುತ್ತದೆ. ಆದ್ದರಿಂದ ಕಾನೂನು ಪ್ರಕಾರ ಹಾಸನದ ವಿವಿ ಉಳಿಸುವಂತೆ ಸರ್ಕಾರಕ್ಕೆ ಆಗ್ರಹ ಮಾಡಬೇಕು ಎಂದು ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಚ್.ಎಲ್. ಮಲ್ಲೇಶ್ ಗೌಡ ಮಾತನಾಡಿ, ವಿದ್ಯಾರ್ಥಿಗಳ ಮೊದಲ ಆಯ್ಕೆ ಸರ್ಕಾರಿ ಶಿಕ್ಷಣ ಸಂಸ್ಥೆಗಳು. ಇಂಜಿನಿಯರ್, ವೈದ್ಯಕೀಯ ಯಾವುದೇ ಉನ್ನತ ಶಿಕ್ಷಣ ಆಗಿರಲಿ ಸರ್ಕಾರಿ ಸಂಸ್ಥೆಗಳಿಗೆ ಬರಲು ಮುಂದಾಗುತ್ತಾರೆ. ಸೀಟು ಇಲ್ಲದಾಗ ಅನಿವಾರ್ಯವಾಗಿ ಖಾಸಗಿ ಕಡೆ ಹೋಗುತ್ತಾರೆ. ಸರ್ಕಾರಗಳು ಇರುವ ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಮುಚ್ಚಲು ಮುಂದಾದರೆ ಮುಂದಿನ ದಿನಗಳಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಯವರು ಉನ್ನತ ಶಿಕ್ಷಣ ಸಂಸ್ಥೆ ಸ್ಥಾಪಿಸಲು ಮುಂದಾಗುತ್ತಾರೆ. ಆಗ ಖಾಸಗಿಯವರು ಮಾಡಿದ ನಿರ್ಣಯದಂತೆ ಉನ್ನತ ಶಿಕ್ಷಣ ಸಾಗುತ್ತದೆ ಎಂದು ಎಚ್ಚರಿಸಿದರು.

ಹೀಗೆ ಮುಂದುವರೆದರೆ ಬಂಡವಾಳ ಶಾಹಿಗಳು ತಮಗೆ ಬೇಕಾದ ಮೌಲ್ಯಗಳನ್ನು ಯುವ ತಲೆಮಾರಿಗೆ ಬಿತ್ತುತ್ತಾರೆ. ಇದು ಉನ್ನತ ಶಿಕ್ಷಣದ ದೊಡ್ಡ ದುರಂತದ ಸಂಗತಿ ಆಗುತ್ತದೆ. ಸ್ಥಾಪನೆ ಮಾಡಿರುವ ವಿಶ್ವವಿದ್ಯಾಲಯವನ್ನು ಗಟ್ಟಿಗೊಳಿಸಬೇಕೆ ಹೊರತು ಮುಚ್ಚುವಂತದ್ದು ಈ ವಲಯಕ್ಕೆ ಮಾಡುವ ಅನ್ಯಾಯ. ಗ್ರಾಮಾಂತರ ಪ್ರದೇಶಕ್ಕೆ ಮಾಡುವ ದ್ರೋಹ ಎಂದರು.

ಹಾಸನ ವಿವಿ ಉಳಿಸಿ ಹೋರಾಟ ಸಮಿತಿ ಅಧ್ಯಕ್ಷ ಡಾ. ವೈ.ಎಸ್. ವೀರಭದ್ರಪ್ಪ, ರೆಡ್ ಕ್ರಾಸ್ ಜಿಲ್ಲಾ ಸಭಾಪತಿ ಹೆಚ್.ಪಿ. ಮೋಹನ್, ಆರ್.ಪಿ. ವೆಂಕಟೇಶ್‌ಮೂರ್ತಿ, ನವಿಲೆ ಅಣ್ಣಪ್ಪ, ಸಾಹಿತಿ ರೂಪ ಹಾಸನ, ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್, ಕೆಪಿಆರ್‌ಎಸ್ ಜಿಲ್ಲಾಧ್ಯಕ್ಷ ಹೆಚ್.ಆರ್. ನವೀನ್‌ಕುಮಾರ್, ಬಿ.ಕೆ. ಮಂಜುನಾಥ್, ಸಾಹಿತಿ ಜ.ನಾ. ತೇಜಶ್ರೀ, ತಾರಾ ಚಂದನ್ ಹಾಗೂ ಇತರರಿದ್ದರು.

# ರಾಗಿ ಖರೀದಿ ಪ್ರಕ್ರಿಯೆ ಭಾರಿ ನಿಧಾನ

## 10 ದಿನದಲ್ಲಿ 4 ಸಾವಿರ ಕ್ವಿಂಟಾಲ್ ಖರೀದಿ | ಭತ್ತಕ್ಕೆ ನಿಗದಿಯಾಗದ ಬೆಲೆ

ಹಾಸನ: ಬೆಂಬಲ ಬೆಲೆಯಡಿ ರಾಗಿ ಖರೀದಿ ಪ್ರಕ್ರಿಯೆಗೆ ಚಾಲನೆ ದೊರೆತಿದೆಯಾದರೂ ನಿಧಾನಗತಿಯ ಪ್ರಕ್ರಿಯೆಯಿಂದ ಹತ್ತು ದಿನದಲ್ಲಿ ಕೇವಲ 4,007 ಕ್ವಿಂಟಾಲ್ ಮಾತ್ರ ಖರೀದಿಯಾಗಿದೆ.

ಜಿಲ್ಲಾದ್ಯಂತ ತಾಲ್ಲೂಕು ಹಾಗೂ ಹೋಬಳಿ ಕೇಂದ್ರ ಸೇರಿ 21 ಖರೀದಿ ಕೇಂದ್ರ ತೆರೆದಿಯಲಾಗಿದೆ. ಒಟ್ಟು 6,22,826 ಕ್ವಿಂಟಾಲ್ ರಾಗಿ ನೋಂದಣೆಯಾಗಿದೆ. ಪ್ರತಿ ಕ್ವಿಂಟಾಲ್‌ಗೆ 4,280 ರೂ. ದರ ನಿಗದಿಪಡಿಸಲಾಗಿದೆ. ಮಾ. 6 ರಿಂದ ಎಲ್ಲಾ ಖರೀದಿ ಕೇಂದ್ರಗಳಲ್ಲಿ ಖರೀದಿ ಮಾಡಲಾಗುತ್ತಿದೆ. ಮಾ. 31ರ ವರೆಗೆ ಖರೀದಿಗೆ ಗುಡುವು ನೀಡಿದ್ದು ಅಷ್ಟರೊಳಗೆ ಪ್ರಕ್ರಿಯೆ ಮುಗಿಯುವ ಸಾಧ್ಯತೆಗಳು ಕಡಿಮೆ. ಹೀಗಾಗಿ ಅವಧಿ ವಿಸ್ತರಿಸಬೇಕೆಂದು ರೈತರು ಆಗ್ರಹಿಸಿದ್ದಾರೆ. ನೋಂದಣೆ ಮಾಡಿಕೊಂಡಿರುವ 40,104 ರೈತರ ಪೈಕಿ ಈ ವರೆಗೆ ಕೇವಲ 246 ರೈತರು ಹತ್ತಿರದ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಪದಾರ್ಥ ಮಾರಾಟ ಮಾಡಿದ್ದಾರೆ.

ಹಾಸನ ಕೇಂದ್ರದಲ್ಲಿ 825.5 ಕ್ವಿಂಟಾಲ್, ದುದ್ದದಲ್ಲಿ 500 ಕೆ.ಜಿ., ನುಗ್ಗೇಹಳ್ಳಿ 511.5. ಕ್ವಿಂಟಾಲ್, ಅರಸೀಕೆರೆ 20 ಕೆ.ಜಿ., ರಾಮನಾಥಪುರ 528.5 ಕ್ವಿಂಟಾಲ್, ಚನ್ನರಾಯಪಟ್ಟಣ 381 ಕ್ವಿಂಟಾಲ್, ಶ್ರವಣಬೆಳಗೊಳ 233 ಕ್ವಿಂಟಾಲ್, ಅರಕಲಗೂಡು 517.5 ಕ್ವಿಂಟಾಲ್, ಉದಯಪುರ 172.5 ಕ್ವಿಂಟಾಲ್, ಹೊಳೆನರಸೀಪುರ ಖರೀದಿ ಕೇಂದ್ರದಲ್ಲಿ ಈ ವರೆಗೆ 317.5 ಕ್ವಿಂಟಾಲ್ ರಾಗಿ ಖರೀದಿಯಾಗಿದೆ. ಆದರೆ ಗಂಡಸಿ, ಬಾಣಾವರ, ಜೆ.ಸಿ. ಪುರ, ಮೊಸಳೆಹೊಸಹಳ್ಳಿ, ಹಳ್ಳಿಮೈಸೂರು,



ಬೇಲೂರು, ಜಾವಗಲ್, ಜಾವಗಲ್ (ಕೇಂದ್ರ 2), ಬಾಗೂರು, ಆಲೂರು, ಹಿರೀಸಾವೆ ಕೇಂದ್ರದಲ್ಲಿ ಖರೀದಿಯೇ ಆಗಿಲ್ಲ.

ಭತ್ತ ಖರೀದಿಗೆ ಅನುಮತಿ ಇಲ್ಲ: ಬೆಂಬಲ ಬೆಲೆ ಯೋಜನೆಯಡಿ ರಾಗಿ ಹಾಗು ಭತ್ತ ಖರೀದಿಗೆ ನೋಂದಣೆಯನ್ನು ಸರ್ಕಾರ ಆರಂಭಿಸಿದೆ. ಸದ್ಯ ರಾಗಿ ಖರೀದಿಗೆ ಚಾಲನೆ ನೀಡಲಾಗಿದೆಯಾದರೂ ಮಾರುಕಟ್ಟೆಯಲ್ಲಿ ಭತ್ತದ ಬೆಲೆ ಹೆಚ್ಚಿರುವುದರಿಂದ ಖರೀದಿಗೆ ಚಾಲನೆ ನೀಡಿಲ್ಲ. ಜಿಲ್ಲಾದ್ಯಂತ 274 ರೈತರು 7,388 ಕ್ವಿಂಟಾಲ್ ಭತ್ತ ಮಾರಾಟಕ್ಕೆ ನೋಂದಣಿ ಮಾಡಿಕೊಂಡಿದ್ದಾರೆ.

ಹಳ್ಳಿಮೈಸೂರು ಕೇಂದ್ರದಲ್ಲಿ 596 ಕ್ವಿಂಟಾಲ್, ರಾಮನಾಥಪುರ 1585, ಹಾಸನ 596, ಅರಕಲಗೂಡು 1840, ಬೇಲೂರು 55, ಆಲೂರು 432, ಸಕಲೇಶಪುರ 29, ಹೊಳೆನರಸೀಪುರ ತಾಲ್ಲೂಕಿನಲ್ಲಿ 2254 ಕ್ವಿಂಟಾಲ್ ಭತ್ತ ಮಾರಾಟಕ್ಕೆ ನೋಂದಣಿ ಮಾಡಿಕೊಳ್ಳಲಾಗಿದೆ.

ಖರೀದಿ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ, ಸರ್ವರ್ ಸಮಸ್ಯೆ ಹೀಗೆ ನಾನಾ ಕಾರಣಗಳಿಂದ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿದೆ. ನೋಂದಣೆ ಮಾಡಿಕೊಂಡಿರುವ ರೈತರಿಗೆ ಮಾರಾಟಕ್ಕೆ ಬರುವ ದಿನವನ್ನು ಮೊದಲೇ ನಿಗದಿಪಡಿಸಲಾಗಿದೆಯಾದರೂ ಆ ದಿನ ಬರಲು ಸಾಧ್ಯವಾಗದೆ ಕೆಲವರು ಪ್ರಕ್ರಿಯೆಯಲ್ಲಿ ಭಾಗವಹಿಸುತ್ತಿಲ್ಲ. ಮತ್ತೆ ಕೆಲವರ ಪದಾರ್ಥಗಳಿಗೆ ಗುಣಮಟ್ಟದ ಹೆಸರಿನಲ್ಲಿ ವಾಪಾಸ್ ಕಳುಹಿಸಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಕಳೆದ ವರ್ಷದಿಂದ ರಾಗಿ ಪದಾರ್ಥವನ್ನು ಜರಡಿ ಮೂಲಕ ಪರಿಶೀಲನೆ ನಡೆಸುತ್ತಿರುವುದು ರೈತರ ಅಸಮಾಧಾನಕ್ಕೆ ಕಾರಣವಾಗಿದೆ.

# ಛತ್ರಪತಿ ಶಿವಾಜಿ ತತ್ತ್ವಾದರ್ಶ ಪಾಲಿಸಲು ಸಲಹೆ

ಹಾಸನ: ಹಿಂದು ಸಮಾಜದ ಸಾಕ್ಷಿ ಪ್ರಜ್ಞೆಯಾಗಿದ್ದ ಛತ್ರಪತಿ ಶಿವಾಜಿ ಕೇವಲ ಮರಾಠ ಸಮಾಜಕ್ಕೆ ಸೀಮಿತವಲ್ಲ, ಇಡೀ ವಿಶ್ವಕ್ಕೆ ಆದರ್ಶ ಪುರುಷ ಎಂದು ಬೆಂಗಳೂರಿನ ಗೋಸಾಯಿ ಮಠದ ಮಂಜುನಾಥ ಸ್ವಾಮೀಜಿ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಛತ್ರಪತಿ ಶಿವಾಜಿ ಮಹಾರಾಜ ಜಯಂತಿ ಉದ್ಘಾಟಿಸಿದ ಶ್ರೀಗಳು, ಶಿವಾಜಿ ರಾಷ್ಟ್ರ ನಾಯಕ, ಸ್ವರಾಜ್ಯ ಸ್ಥಾಪಕರಾಗಿದ್ದಾರೆ ಎಂದರು.

ಭಾರತೀಯರೆಲ್ಲರೂ ಒಂದೇ ಎಂಬ ಉದಾತ್ತ ಆದರ್ಶ ಕೊಟ್ಟಿರುವ ಮಹಾಪುರುಷರಲ್ಲಿ ಶಿವಾಜಿ ಪ್ರಮುಖರು. ವಿಶ್ವಕ್ಕೆ ಕೊಡುಗೆ ಸಲ್ಲಿಸಿದ ಮಹನೀಯರನ್ನು ಕೇವಲ ಒಂದು ಸಮುದಾಯ ಅಥವಾ ಒಂದು ದಿನದ ಆಚರಣೆಗೆ ಸೀಮಿತಗೊಳಿಸಬಾರದು.



ಅವರ ತತ್ವಾದರ್ಶಗಳನ್ನು ಅನುಸರಿಸಿ ಎಲ್ಲರೂ ಒಳ್ಳೆಯ ಕೆಲಸದಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಮಹಾನ್ ಕ್ರಾಂತಿಕಾರಿಯಾಗಿದ್ದ ಶಿವಾಜಿ ಅವರ ಧೈರ್ಯ, ಶೌರ್ಯ, ನೇರ ನುಡಿಯನ್ನು ಮೆಚ್ಚಬೇಕು. ಅವರು ಹಾಕಿಕೊಟ್ಟಿರುವ ಮಾರ್ಗದಲ್ಲಿ ಯುವ ಸಮುದಾಯ ಸಾಗಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಪಿ. ಸ್ವರೂಪ್ ಮಾತನಾಡಿ, ಶಿವಾಜಿ ಜಗತ್ತು ಕಂಡ ಶ್ರೇಷ್ಠ ವೀರ ಯೋಧ. ಶಿವಾಜಿ ಪುತ್ಥಳಿಯನ್ನು ನಗರದಲ್ಲಿ ಶೀಘ್ರ ಅನಾವರಣ ಮಾಡಲಾಗುವುದು. ಮರಾಠ ಸಮುದಾಯದ ಮಕ್ಕಳಿಗೆ ವಸತಿ ನಿಲಯ ನಿರ್ಮಾಣ ಮಾಡಿಕೊಡುವುದರ ಕುರಿತು ಚಿಂತನೆ ನಡೆಸಲಾಗುವುದು. ಶಾಸಕರ ನಿಧಿಯಿಂದ ಅಗತ್ಯ ಅನುದಾನ ನೀಡುತ್ತೇನೆ ಎಂದು ಭರವಸೆ ನೀಡಿದರು.

ವಕೀಲ ವಿಜಯಕುಮಾರ್ ನಾರ್ವೆ ಅವರು ಮಾತನಾಡಿ, ಭಾರತ ಸಾಂಸ್ಕೃತಿಕ, ಆಧ್ಯಾತ್ಮಿಕ, ಸಾಹಿತ್ಯಿಕವಾಗಿ ಶ್ರೀಮಂತ ರಾಷ್ಟ್ರ. ಪುಣ್ಯ ಭೂಮಿಯಲ್ಲಿ ಮಹಾನ್ ಪುರುಷರು, ಸಾಧು ಸಂತರು ಜನಿಸಿದ್ದಾರೆ. ಅಂತಹ ಪ್ರಮುಖರಲ್ಲಿ ಛತ್ರಪತಿ ಶಿವಾಜಿ ಕೂಡ ಒಬ್ಬರು. ಅನೇಕ ಸಮಾಜಮುಖಿ ಕಾರ್ಯಗಳ ಮೂಲಕ ಮಾದರಿಯಾಗಿದ್ದಾರೆ ಎಂದು ಉಪನ್ಯಾಸ ನೀಡಿದರು.

ಶಿವಾಜಿ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ಹಾಸನಾಂಬ ಕಲಾಕ್ಷೇತ್ರದವರೆಗೆ ಮೆರವಣಿಗೆ ನಡೆಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಹೆಚ್.ಪಿ. ತಾರಾನಾಥ್, ಸರ್ಕಾರಿ ನೌಕರರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಈ. ಕೃಷ್ಣೇಗೌಡ ಮತ್ತಿತರರಿದ್ದರು.

# ಮಹಿಳೆಯರಿಗೆ ಗೌರವ ನೀಡುವುದು ಜವಾಬ್ದಾರಿ

ಹಾಸನ: ಸ್ವಸ್ಥ ಸಮಾಜ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಅತ್ಯಮೂಲ್ಯವಾಗಿದ್ದು ಅವರನ್ನು ಗೌರವ ಸ್ಥಾನದಲ್ಲಿಡಬೇಕು ಎಂದು ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಿ.ಪಿ. ಕೃಷ್ಣೇಗೌಡ ಹೇಳಿದರು.

ನಗರದ ಗುರುಭವನದಲ್ಲಿ ಸಾವಿತ್ರಿಬಾಯಿ ಫುಲೆ ಜಿಲ್ಲಾ ಹಾಗೂ ತಾಲ್ಲೂಕು ಸಂಘದಿಂದ ಹಮ್ಮಿಕೊಂಡಿದ್ದ ಸಾವಿತ್ರಿಬಾಯಿ ಫುಲೆ ಪುಣ್ಯ ತಿಥಿ ಕಾರ್ಯಕ್ರಮದಲ್ಲಿ ಮಾತನಾಡಿದ



ಅವರು, ಮಹಿಳೆ ಸಮಾಜದ ಕಣ್ಣು. ದೇಶದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಶ್ರಮ, ತ್ಯಾಗವನ್ನು ಎಲ್ಲರೂ ಸ್ಮರಿಸಬೇಕು. ಶಿಕ್ಷಕ ವೃತ್ತಿಯಲ್ಲಿರುವ ಮಹಿಳೆಯರು ಕುಟುಂಬ ನಿರ್ವಹಣೆ, ವಿದ್ಯಾರ್ಥಿಗಳಿಗೆ ಪಾಠ ಬೋಧನೆ ಜೊತೆಗೆ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಶಕ್ತಿಮೀರಿ ಶ್ರಮಿಸುತ್ತಾರೆ ಎಂದು ಹೇಳಿದರು.

ಪೂರ್ಣಪ್ರಜ್ಞ ಶಾಲೆಯ ಸಂಸ್ಥಾಪಕ ಲಕ್ಷ್ಮಿಕಾಂತ್ ಅವರು ಮಾತನಾಡಿ, ಮಹಿಳೆಯರು ತಾಳ್ಮೆ, ಸಹನೆ ಹಾಗು ಪರಿಶ್ರಮಕ್ಕೆ ಆದರ್ಶ. ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿರುತ್ತದೆ. ಶಿಕ್ಷಕರ ವೃತ್ತಿ ಅತ್ಯಮೂಲ್ಯವಾಗಿದ್ದು ಅದಕ್ಕೆ ಚ್ಯುತಿ ಬರದಂತೆ ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಬಿ.ಆರ್. ಬೊಮ್ಮೇಗೌಡ ಮಾತನಾಡಿ, ಗುರು ಹಿರಿಯರಿಗೆ ಗೌರವ ಕೊಟ್ಟರೆ ಬದುಕಿನಲ್ಲಿ ಯಾವ ಸಮಸ್ಯೆಯು ಎದುರಾಗುವುದಿಲ್ಲ. ಒಂದು ವೇಳೆ ಸಂದಿಗ್ಧ ಪರಿಸ್ಥಿತಿಗೆ ಸಿಲುಕಿದರೆ ಅದರಿಂದ ಪಾರು ಮಾಡಲು ಗುರುಗಳು ಇರುತ್ತಾರೆ ಎಂದರು.

ಸಾವಿತ್ರಿಬಾಯಿ ಬಾಪುಲೆ ಸಂಘದ ಜಿಲ್ಲಾಧ್ಯಕ್ಷೆ ಆರ್. ಆಶಾ, ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಕೃಷ್ಣೇಗೌಡ, ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎನ್. ಮಂಜುಳಾ, ಸಮನ್ವಯಾಧಿಕಾರಿ ಲಿಲ್ಲಿ ಡಯಾನ, ನೌಕರ ಸಂಘದ ಪ್ರಧಾನ ಕಾರ್ಯದರ್ಶಿ ಡಾ. ಲಕ್ಷ್ಮಿಕಾಂತ್, ಗೃಹ ನಿರ್ಮಾಣ ಸಂಘದ ಅಧ್ಯಕ್ಷ ಡಾ. ಶಿವೇಗೌಡ, ವಾಣಿವಿಲಾಸ ಸರ್ಕಾರಿ ಶಾಲೆ ನಿವೃತ್ತ ಶಿಕ್ಷಕಿ ಆರ್.ಎಸ್. ಸರೋಜಮ್ಮ, ಸಾವಿತ್ರಿಬಾಯಿ ಫುಲೆ ಸಂಘದ ತಾಲ್ಲೂಕು ಅಧ್ಯಕ್ಷೆ ಮೀನಾಕ್ಷಿ, ವೆಂಕಟೇಶ್ ರವೀಂದ್ರ, ಮಹಾಲಕ್ಷ್ಮಿ, ರಾಧಾ, ರತ್ನಮ್ಮ, ಗೀತಾ ಹಾಗೂ ಇತರರಿದ್ದರು.

# ಕೆಪಿಎಸ್ ಚುನಾವಣೆ: ಬಿಜೆಪಿ-ಜೆಡಿಎಸ್ ಹೈಡ್ರಾಮಾ

ಹಾಸನ: ತಾಲ್ಲೂಕಿನ ಕ್ಯಾತನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಭಾನುವಾರ ನಡೆದ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರ ನಡುವೆ ಗಲಾಟೆ ನಡೆದು ಶಾಮಿಯಾನ ಹಾಗೂ ಕುರ್ಚಿಗಳನ್ನು ನಾಶಪಡಿಸಿದ ಹೈಡ್ರಾಮಾ ನಡೆಯಿತು.

ಗ್ರಾಮದ ಲಕ್ಷ್ಮೀ ಜನಾರ್ಧನ ಶಾಲೆಯಲ್ಲಿ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಅಭ್ಯರ್ಥಿಗಳ ಬೆಂಬಲಕ್ಕೆ ಸಹಕಾರಿ ಸಂಘದಿಂದ ಹೊರಗಿನವರು ಬಂದಿದ್ದಾರೆ. ಮತದಾರರಿಗೆ ಆಮಿಷವೊಡ್ಡುವ ಕೆಲಸ ನಡೆಯುತ್ತಿದೆ ಎಂದು ಜೆಡಿಎಸ್ ಮುಖಂಡರು ವಾಗ್ವಾದ ನಡೆಸಿದರು.

ಸ್ಥಳೀಯ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ಮುಂದುವರೆದು ಶಾಲಾ ಆವರಣದಲ್ಲಿ ಹಾಕಿದ್ದ ಶಾಮಿಯಾನ ಮತ್ತು ಕುರ್ಚಿಗಳನ್ನು ಒಡೆದು ಹಾಕಿದರು. ಗಲಾಟೆ ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ ಹಾಗೂ ಡಿವೈಎಸ್‌ಪಿ ಮುರುಳಿಧರ್ ಅವರು ಎಲ್ಲರನ್ನೂ



ಸಮಾಧಾನಪಡಿಸಿದರು. ನಂತರ ಮತದಾನ ಪ್ರಕ್ರಿಯೆ ಶಾಂತಿಯುತವಾಗಿ ನಡೆಯಿತು.

ಜೆಡಿಎಸ್ ಆರೋಪ ಏನು: ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮತದಾರರು ಹಾಗೂ ಅಭ್ಯರ್ಥಿಗಳು ಮಾತ್ರ ಮತಕೇಂದ್ರದತ್ತ ಬರಬೇಕು. ಸಂಘದ ಸದಸ್ಯತ್ವ ಪಡೆಯದೆ ಇದ್ದವರು ಇಲ್ಲಿಗೆ ಬಂದು ಮತದಾರರಿಗೆ ಆಮಿಷವೊಡ್ಡಿದ್ದಾರೆ ಎಂದು ಜೆಡಿಎಸ್ ಮುಖಂಡರು ಆರೋಪಿಸಿದರು. ರಾಷ್ಟ್ರ ಮಟ್ಟದಲ್ಲಿ ಬಿಜೆಪಿ-ಜೆಡಿಎಸ್ ಹೊಂದಾಣಿಕೆ ಮಾಡಿಕೊಂಡಿವೆ. ಮೈತ್ರಿ ಧರ್ಮ ಪಾಲಿಸುವುದು ಎರಡು ಪಕ್ಷದ ಕರ್ತವ್ಯ. ಆದರೆ ಬಿಜೆಪಿಯ ಕೆಲವರು ಗ್ರಾಮದಲ್ಲಿ ಅಶಾಂತಿ ಸೃಷ್ಟಿಸಲಯ ಪ್ರಯತ್ನಿಸುತ್ತಿದ್ದಾರೆ. ಪಾರದರ್ಶಕ ಚುನಾವಣೆಗೆ ಅಡ್ಡಿಪಡಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕ್ಯಾತನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ತನ್ನದೇಯಾದ ಇತಿಹಾಸವಿದೆ. ಇಲ್ಲಿ ರಾಜಕೀಯ ಪ್ರವೇಶಿಸುವುದು ಬೇಡ. ಸಮನ್ವಯದಿಂದ ಎಲ್ಲರೂ ಮುನ್ನಡೆಯಬೇಕಿದೆ. ಅಶಾಂತಿ ವಾತಾವರಣ ಸೃಷ್ಟಿಯಾದರೆ ಗ್ರಾಮ ಅಭಿವೃದ್ಧಿಗೆ ಹೊಡೆತ ಬೀಳುತ್ತದೆ ಎಂದು ವಾದಿಸಿದರು.

# ಮುಗಿಲ ಮಲ್ಲಿಗೆ ಚಿತ್ರೀಕರಣ ಮುಕ್ತಾಯ

ಬೆಂಗಳೂರು: ಸ್ನೇಹಾಲಯಂ ಕ್ರಿಯೇಷನ್ಸ್ ಸಮರ್ಪಿಸಿ ಎ.ಎ.ಸ್. ಆರ್. ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಎ. ನಾಗರಾಜ ರೆಡ್ಡಿ ನಿರ್ಮಿಸುತ್ತಿರುವ ಅಮುಗಿಲ ಮಲ್ಲಿಗೆಟಿ ಕನ್ನಡ ಚಲನಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ.

ಕಪಿಲ್ ಎಂ. ಶ್ರೀನಿವಾಸ್ ಅವರ ನೃತ್ಯ ಸಂಯೋಜನೆಯಲ್ಲಿ ಅಲವ್ ಅನ್ನೋದ್ ಇಲ್ದಿದ್ರೆ ಲೈಫ್ ತುಂಬಾ ಸಿಂಪಲ್ಲುಟಿಎಂಬ ಹಾಡಿನ ಚಿತ್ರೀಕರಣದ ಮುಕ್ತಾಯದೊಂದಿಗೆ ಕುಂಬಳಕಾಯಿ ಒಡೆಯಲಾಯಿತು. ಕಮರೊಟ್ಟು ಚೆಕ್ ಪೋಸ್ಟ್ ಖ್ಯಾತಿಯ ಸನತ್ ಮತ್ತು ಸಹನ ಚಂದ್ರಶೇಖರ್ ನಾಯಕ-ನಾಯಕಿಯಾಗಿ ನಟಿಸಿರುವ ಅಮುಗಿಲ ಮಲ್ಲಿಗೆಟಿಸಿನಿಮಾದಲ್ಲಿ, ಥ್ರಿಲ್ಲರ್ ಮಂಜು, ಹಿರಿಯ ನಟಿ ಭವ್ಯ, ಬಾಹುಬಲಿ ಖ್ಯಾತಿಯ ಕಾಲಕೇಯ ಪ್ರಭಾಕರ್. ಕಿಲ್ಲರ್ ವೆಂಕಟೇಶ್. ಶಂಖನಾದ ಆಂಜಿನಪ್ಪ, ಅನ್ನಪೂರ್ಣ, ಕಾವ್ಯ ಪ್ರಕಾಶ್, ಧೀನ, ಶಂಕರ್, ರಾಜೇಶ್, ರವಿ, ಕಿರಣ್ ಗಟ್ಟಿಗನಬ್ಬೆ, ಮೋನಿಕಾ ಕಿರಣ್ ಕುಮಾರ್, ಎಂ.ವಿ. ಸಮಯ್. ಸಿದ್ದಯ್ಯ ಎಸ್. ಹಿರೇಮಠ,



ಬೃಂದ, ಕಿಶೋರ್ ಕುಂಬ್ಳೆ, ಶಿವು ಕಾಸರಗೋಡು, ಸತ್ಯವಾರ ನಾಗೇಶ್, ಸಿ.ಟಿ. ಜಯರಾಮ, ವಸಂತ ನಾಯಕ್ ಮೊದಲಾದವರು ನಟಿಸಿದ್ದಾರೆ. ಬಹುಭಾಷಾ ಯುವ ಪ್ರತಿಭಾವಂತ ಚಿತ್ರ ನಿರ್ದೇಶಕ ರಾಜೀವ್ ಕೃಷ್ಣ ಗಾಂಧಿ ಕಥೆ-ಚಿತ್ರಕಥೆ-ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ.

ಒಂದು ದ್ವೇಷ ಮತ್ತು ಪ್ರೀತಿಯ ಸುತ್ತ ನಡೆಯುವ ಪ್ರೇಮಕಥೆಯ ಕಥಾ ವಸ್ತು ಹೊಂದಿರುವ ಚಿತ್ರವನ್ನು ಹೊಸಕೋಟೆ ಸುತ್ತ ಮುತ್ತಲಿನ ಕಂಬಳಿಪುರ, ಕಾಟೇರಮ್ಮ, ಭಕ್ತರಹಳ್ಳಿ, ಗಟ್ಟಿಗನಬ್ಬೆ, ಕೊಳತೂರು ಎಂ.. ಸತ್ಯವಾರ ಮೊದಲಾದ ಕಡೆ ಚಿತ್ರೀಕರಿಸಲಾಗಿದೆ. ಛಾಯಾಗ್ರಾಹಣ ಅಭಿನಂದನ್ ಶೆಟ್ಟಿ ,ಥ್ರಿಲ್ಲರ್ ಮಂಜು ಸಾಹಸ, ಅನಿರುದ್ದ ಶಾಸ್ತ್ರಿ ಸಂಗೀತ, ಮೋಹನ್ ಕುಮಾರ್ ಪ್ರಸಾಧನ, ಇಂದ್ರ ಕುಮಾರ್ ಸ್ಥಿರ ಚಿತ್ರಣ, ಪ್ರವೀಣ್ ಭದ್ರಾವತಿ , ವಿ.ಮುರುಗನ್ ಸಹ ನಿರ್ದೇಶನ,ವಿನಯ್ ಜಿ ಆಲೂರು ರವರ ಸಂಕಲನ ,ಎಂ ಜಿ ಕಲ್ಲೇಶ್, ಡಾ.ಪ್ರಭು ಗಂಜಿಹಾಳ , ಡಾ. ವೀರೇಶ್ ಹಂಡಿಗಿ ಪಿ.ಆರ್.ಓ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಸದ್ಯ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಲ್ಲಿ ತೊಡಗಿದ್ದು ಏಪ್ರಿಲ್ ತಿಂಗಳಲ್ಲಿ ರಾಜ್ಯಾದ್ಯಂತ ಬಿಡುಗಡೆ ಮಾಡಲು ಚಿತ್ರತಂಡ ಸಜ್ಜಾಗುತ್ತಿದೆ ಎಂದು ಎ.ನಾಗರಾಜ ರೆಡ್ಡಿ ಮತ್ತು ನಿರ್ದೇಶಕ ರಾಜೀವಕೃಷ್ಣ ಗಾಂಧಿ ಹೇಳಿದ್ದಾರೆ.

# ಏ. 12-13 ರಂದು ಪತ್ರಕರ್ತರ ಕ್ರೀಡಾಕೂಟ

ಹಾಸನ: ನಗರದ ಸರ್ಕಾರಿ ಕಲಾ ಹಾಗೂ ವಿಜ್ಞಾನ ಕಾಲೇಜು ಆವರಣದಲ್ಲಿ ಮಾ. 22 ರಂದು ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಪತ್ರಕರ್ತರ ಕ್ರಿಕೆಟ್ ಪಂದ್ಯಾವಳಿಯನ್ನು ಏ. 12 ಮತ್ತು 13 ರಂದು ಆಯೋಜಿಸಲಾಗಿದೆ.


ಸಭೆಯ ಅಧ್ಯಕ್ಷತೆ ವಹಿಸಿದ್ದ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ್ ತಗಡೂರು ಮಾತನಾಡಿ, ಕಳೆದ ವರ್ಷ ಮಂಗಳೂರಿನಲ್ಲಿ ಕ್ರಿಕೆಟ್ ಪಂದ್ಯಾವಳಿ ಅಚ್ಚುಕಟ್ಟಾಗಿ ಆಯೋಜನೆ ಮಾಡಲಾಗಿತ್ತು. ಅದಕ್ಕಿಂತ ವಿಭಿನ್ನವಾಗಿ ಹಾಸನದಲ್ಲಿ ಪಂದ್ಯಾವಳಿ ಆಯೋಜಿಸಲು ತೀರ್ಮಾನಿಸಲಾಗಿದೆ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರು ಕ್ರೀಡೆಯಲ್ಲಿ ಪಾಲ್ಗೊಳ್ಳಬಹುದು. ಹೊರ ಜಿಲ್ಲೆಯಿಂದ ಬರುವ ಪತ್ರಕರ್ತ ಕ್ರೀಡಾಪಟುಗಳಿಗೆ ವಸತಿ ವ್ಯವಸ್ಥೆ ಮಾಡಲಾಗಿದೆ. ಕ್ರೀಡಾಕೂಟ ಯಶಸ್ಸಿಗೆ ಜಿಲ್ಲಾ ಸಮಿತಿ, ಉಪ ಸಮಿತಿ ರಚಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ಹೆಚ್. ವೇಣುಕುಮಾರ್ ಮಾತನಾಡಿ, ಕ್ರಿಕೆಟ್ ಪಂದ್ಯಾವಳಿಗೆ ಸಭಾಪತಿ ಯು.ಟಿ. ಖಾದರ್, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ಆಗಮಿಸಲಿದ್ದಾರೆ ಎಂದರು.

ರಾಜ್ಯ ಪತ್ರಕರ್ತರ ಸಂಘದ ಕಾರ್ಯಕಾರಣಿ ಸದಸ್ಯ ಹೆಚ್.ಬಿ. ಮದನ್ ಗೌಡ, ಮಾಜಿ ಜಿಲ್ಲಾಧ್ಯಕ್ಷರಾದ ಮಂಜುನಾಥ್, ರವಿ ನಾಕಲಗೂಡು, ಬಿ.ಆರ್. ಉದಯಕುಮಾರ್, ಪ್ರಸನ್ನಕುಮಾರ್, ಕಾರ್ಯದರ್ಶಿ ಪಿ.ಎ. ಶ್ರೀನಿವಾಸ್, ಕುಮಾರ್, ನಟರಾಜು, ಜಿ. ಪ್ರಕಾಶ್, ಹೆತ್ತೂರ್ ನಾಗರಾಜು ಮತ್ತಿತರರಿದ್ದರು.

# ಪಿಕೆಪಿಎಸ್‌ಗೆ ಶಕುಂತಲಾ ಅಧ್ಯಕ್ಷೆ



ಚನ್ನರಾಯಪಟ್ಟಣ: ತಾಲ್ಲೂಕಿನ ಹಿರೀಸಾವೆ ಹೋಬಳಿ ಮತಿಘಟ್ಟ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಶಕುಂತಲಾ ನಂಜುಂಡಸ್ವಾಮಿ ಭಾನುವಾರ ಅವಿರೋಧ ಆಯ್ಕೆಯಾದರು.

ಇತ್ತೀಚೆಗಷ್ಟೇ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಭಾನುವಾರ ಚುನಾವಣೆ ನಿಗದಿಯಾಗಿತ್ತು. ಶಕುಂತಲಾ ನಂಜುಂಡಸ್ವಾಮಿ ಹೊರತುಪಡಿಸಿ ಮತ್ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಸಾವಿತ್ರಮ್ಮ ಅವರು ಶಕುಂತಲಾ ನಂಜುಂಡಸ್ವಾಮಿ ಅವರನ್ನು ಅವಿರೋಧ ಘೋಷಣೆ ಮಾಡಿದರು.

ಮಾಜಿ ಅಧ್ಯಕ್ಷ ಶ್ರೀಕಂಠೇಗೌಡ, ಉಪಾಧ್ಯಕ್ಷ ರಾಮು, ಮಾಜಿ ಅಧ್ಯಕ್ಷ ಎ.ಜಿ. ಪ್ರಭಾಕರ್, ಜುಟ್ಟನಹಳ್ಳಿ ಸಹಕಾರ ಸಂಘದ ನಿರ್ದೇಶಕ ಸುನೀಲ್, ಜುಟ್ಟನಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಯಧುರಾಜು, ಪ್ರಮುಖರಾದ ಜಿಕೆವಿಕೆ ದೇವರಾಜ್ ನಿರ್ದೇಶಕರು ಹಾಗೂ ಇತರರಿದ್ದರು.

# ಟ್ರ್ಯಾಕ್ಟರ್ ಡಿಕ್ಕಿಯಾಗಿ ಬೈಕ್ ಸವಾರ ಸಾವು

ಚನ್ನರಾಯಪಟ್ಟಣ: ಟ್ರ್ಯಾಕ್ಟರ್ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಅಕ್ಕನಹಳ್ಳಿ ಕೂಡು ಪ್ರಾಥಮಿಕ ಆರೋಗ್ಯ ಕೇಂದ್ರ ಮುಂಭಾಗ ನಡೆದಿದೆ.

ಹಿರೀಸಾವೆ ಹೋಬಳಿ ದುಗ್ಗೇನಹಳ್ಳಿ ಗ್ರಾಮದ ಶಿವಕುಮಾರ (61) ಮೃತರು.

ಚನ್ನರಾಯಪಟ್ಟಣದಿಂದ ಸಂಜೆ 7ರ ಸಮಯದಲ್ಲಿ ಊರಿಗೆ ವಾಪಾಸ್ಸಾಗುತ್ತಿದ್ದಾಗ ಎದುರುಗಡೆಯಿಂದ ವೇಗವಾಗಿ ಬಂದ ಟ್ರ್ಯಾಕ್ಟರ್ ಡಿಕ್ಕಿಯಾಗಿ ಗಂಭೀರ ಗಾಯಗೊಂಡಿದ್ದರು. ಕೂಡಲೇ ಆಂಬ್ಯುಲೆನ್ಸ್ ಮೂಲಕ ತಾಲ್ಲೂಕು ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟಿದ್ದಾರೆ. ನುಗ್ಗೇಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸ್ವದೇಶಿ ವಸ್ತು ಖರೀದಿಸಲು ಜಿಲ್ಲಾಧಿಕಾರಿ ಸಲಹೆ

ಹಾಸನ: ಪ್ರತಿಯೊಬ್ಬರು ಸ್ವದೇಶಿ ವಸ್ತುಗಳನ್ನು ಖರೀದಿಸಿ ಬಳಸುವ ಮೂಲಕ ದೇಶದ ಬಗ್ಗೆ ಪ್ರೀತಿ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ ಸತ್ಯಭಾಮ ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಮಾಹಿತಿ ಕೇಂದ್ರ ಹಾಗೂ ವಾಣಿಜ್ಯ ಶಾಸ್ತ್ರ ವಿಭಾಗ ಮಹಿಳಾ ಪ್ರಥಮ ದರ್ಜೆ ಕಾಲೇಜು ಇವರ ಸಂಯುಕ್ತಾಶ್ರದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ನಾಗರೀಕರು ಯಾವುದೇ ವಸ್ತುವನ್ನು ಖರೀದಿಸುವಾಗ ಜವಾಬ್ದಾರಿಯಿಂದ ಗುಣಮಟ್ಟ, ದರ, ತೂಕ ಅಳತೆಯ ಬಗ್ಗೆ ಗಮನಹರಿಸಿ ತೆಗೆದುಕೊಳ್ಳುವಂತೆ ತಿಳಿಸಿದರು.

ಹೆಚ್ಚಿನ ಲಾಭಗಳಿಸುವ ಉದ್ದೇಶದಿಂದ ವ್ಯಾಪಾರಸ್ಥರು ಕಲಬೆರಕೆ ಮಾಡಿ ಮಾರಾಟ ಮಾಡುತ್ತಾರೆ ಈ ನಿಟ್ಟಿನಲ್ಲಿ ನಾಗರೀಕರು ಖರೀದಿ ಮಾಡುವ ಸಂದರ್ಭದಲ್ಲಿ ಪದಾರ್ಥಗಳನ್ನು ಪರಿಶೀಲಿಸಿ ತೆಗೆದುಕೊಳ್ಳಬೇಕು ಎಂದರು.

ಮೊದಲನೆಯದಾಗಿ ವಸ್ತುಗಳ ಬ್ರಾಂಡ್ ಹಾಗೂ ಅದರ ಮೌಲ್ಯದ ಬಗ್ಗೆ ಗಮನಹರಿಸಿ ಸಾಮಾನ್ಯ ಜ್ಞಾನದಿಂದ ಅರಿತುಕೊಂಡು ತಿಳುವಳಿಕೆಯಿಂದ ಸುಲಲಿತವಾಗಿ ವ್ಯವಹರಿಸಬೇಕು ಎಂಬುದನ್ನು ಉದಾಹರಣೆ ನೀಡುವ ಮೂಲಕ ತಿಳಿಸಿದರು.

ಮನುಷ್ಯನ ದುರಾಸೆಯಿಂದ ಪ್ರಾಮಾಣಿಕತೆ ಕಡಿಮೆಯಾಗುತ್ತಿದೆ. ಪರಿಶ್ರಮದಿಂದ ಗಳಿಸುವುದು ಕೊನೆಯವರೆಗೆ ಇರುತ್ತದೆ ಸರಿದಾರಿಯಲ್ಲಿ ಸಾಗಿದರೆ ನೆಮ್ಮದಿ ಜೀವನ ನಡೆಸಬಹುದು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಜಿ.ಕೆ. ಅವರು ಮಾತನಾಡಿ ಪ್ರತಿಯೊಬ್ಬರಿಗೂ ಗ್ರಾಹಕರ ಹಕ್ಕುಗಳ ಬಗ್ಗೆ ತಿಳುವಳಿಕೆ ಅತ್ಯಗತ್ಯ ಎಂದರು.

ಗ್ರಾಹಕರು ಯಾವುದೇ ವಸ್ತುಗಳನ್ನು ಖರೀದಿಸುವಾಗ ಗುಣಮಟ್ಟದ ಬಗ್ಗೆ ಗಮನಹರಿಸಬೇಕು ಹಾಗೂ ಕಡ್ಡಾಯವಾಗಿ ರಶೀದಿ ಪಡೆದುಕೊಳ್ಳಬೇಕು. ವಸ್ತುಗಳಲ್ಲಿ ನ್ಯೂನ್ಯತೆ ಕಂಡು ಬಂದಲ್ಲಿ ಪರಿಹಾರ ಪಡೆಯಲು ರಶೀದಿ ಸಹಕಾರಿಯಾಗುತ್ತದೆ ಎಂದರು.

ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಸಿ.ಎಂ ಚಂಚಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ರಾಮಾಯಣ, ಮಹಾಭಾರತ ಕಾಲದಿಂದಲೂ ವಸ್ತುಗಳು ಮತ್ತು ಸೇವೆಗಳಲ್ಲಿ ನ್ಯೂನ್ಯತೆಗಳು ಕಂಡುಬಂದಿವೆ ಎಂದು ಉದಾಹರಣೆಗಳ ಸಹಿತ ವಿವರಿಸಿದರು.

ಗ್ರಾಹಕರ ವ್ಯಾಜ್ಯಗಳ ಪರಿಹಾಯ ಆಯೋಗದಲ್ಲಿ ದೂರು ಸಲ್ಲಿಸಿ ಯಾವುದೇ ವಸ್ತುಗಳ ಮತ್ತು ಸೇವೆಗಳ ನ್ಯೂನ್ಯತೆಗೆ ಪರಿಹಾರ ಪಡೆಯಲು ಅವಕಾಶ ಇದೆ ಎಂದರಲ್ಲದೆ, ಮೂರು ತಿಂಗಳ ಒಳಗೆ ಪ್ರಕರಣ ಪೂರ್ಣಗೊಳಿಸಬೇಕು. ಮಿಡಿಯೇಷನ್ ಮೂಲಕವೂ ಒಂದೆರಡು ತಿಂಗಳಲ್ಲಿಯೂ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಸೇವಾ ನ್ಯೂನತೆಗೆ ನಿರ್ದಿಷ್ಟ ಕಾನೂನುಗಳಡಿ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಂಡು ಪರಿಹಾರ ಪಡೆಯಬಹುದಾಗಿದೆ ಎಂದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248